## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಕೆಲವು ನಿರ್ದಿಷ್ಟ ವೃಂದಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಕುರಿತಂತೆ, 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**
1. ದಿನಾಂಕ 01.06.2017ರ ಸರ್ಕಾರಿ ಆದೇಶ ಸಂಖ್ಯೆ: ಆಇ22ಎಸ್ಆರ್‌ಪಿ2017.
2. ದಿನಾಂಕ 15.06.2017ರ ಸೇರ್ಪಡೆ ಆದೇಶ ಸಂಖ್ಯೆ: ಆಇ 22 ಎಸ್ಆರ್‌ಪಿ 2017.
3. ದಿನಾಂಕ 01.03.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 6 ಎಸ್ಆರ್‌ಪಿ 2018.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ದಿನಾಂಕ:01.06.2017ರ ಸರ್ಕಾರಿ ಆದೇಶದಲ್ಲಿ ರಾಜ್ಯ ಸರ್ಕಾರಿ ನೌಕರರ ವೇತನ ಶ್ರೇಣಿಗಳನ್ನು ಮತ್ತು ಭತ್ಯೆಗಳನ್ನು ಪರಿಷ್ಕರಿಸಲು ಮತ್ತು ನೂತನ ವೇತನ ರಚನೆಯನ್ನು ರೂಪಿಸಲು ಹಾಗೂ (2) ರಲ್ಲಿ ಓದಲಾದ ದಿನಾಂಕ:15.06.2017ರ ಸೇರ್ಪಡೆ ಆದೇಶದಲ್ಲಿ ಸೇವಾ ಷರತ್ತುಗಳ ಪರಿಷ್ಕರಣೆ ಕುರಿತಂತೆ ಪರಿಶೀಲಿಸಲು 6ನೇ ರಾಜ್ಯ ವೇತನ ಆಯೋಗವನ್ನು ರಚಿಸಿ ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ, ಆಯೋಗವು ತನ್ನ ವರದಿಯ ಮೊದಲನೇ ಸಂಪುಟವನ್ನು ದಿನಾಂಕ:31.01.2018ರಂದು ಸಲ್ಲಿಸಿರುತ್ತದೆ.

ಮೇಲೆ (3) ರಲ್ಲಿ ಓದಲಾದ ದಿನಾಂಕ:01.03.2018ರ ಸಕಾರಿ ಆದೇಶದಲ್ಲಿ, ಮುಖ್ಯ ವೇತನ ಶ್ರೇಣಿ ಮತ್ತು 25 ಸ್ಥಾಯಿ ವೇತನ ಶ್ರೇಣಿಗಳು ಹಾಗೂ ಪಿಂಚಣಿ/ಕುಟುಂಬ ಪಿಂಚಣಿ ಮತ್ತು ಅದರಲ್ಲಿ ತಿಳಿಸಿರುವ ಭತ್ಯೆಗಳನ್ನು ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ.

6ನೇ ರಾಜ್ಯ ವೇತನ ಆಯೋಗವು, ದಿನಾಂಕ:30.04.2018ರಂದು ಸಲ್ಲಿಸಿರುವ ವರದಿಯ 2ನೇ ಸಂಪುಟದಲ್ಲಿ, ಕೆಲವು ನಿರ್ದಿಷ್ಟ ಹುದ್ದೆಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ಕೆಲವು ವೃಂದಗಳಿಗೆ ಹೊಸದಾಗಿ ಭತ್ಯೆಗಳನ್ನು ನೀಡುವಂತೆ ಶಿಫಾರಸ್ಸು ಮಾಡಿರುತ್ತದೆ. ಕೆಲವು ನಿರ್ದಿಷ್ಟ ವೃಂದಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಆಯೋಗದ ಶಿಫಾರಸ್ಸನ್ನು ಸರ್ಕಾರವು ಪರಿಶೀಲಿಸಿರುತ್ತದೆ. ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವಂತೆ ಶಿಫಾರಸ್ಸು ಮಾಡಲಾದ 66 ವೃಂದಗಳ ಪೈಕಿ ಈ ಕೆಳಕಂಡ ವೃಂದಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಅಂಶವನ್ನು ಸರ್ಕಾರವು ಪರಿಶೀಲಿಸಿದೆ:-

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಉಪ ಕಾರ್ಯದರ್ಶಿಗಳು (ಜಿಲ್ಲಾ ಪಂಚಾಯತ್) (ಆಯ್ಕೆ ಶ್ರೇಣಿ).
2. ಕಂದಾಯ ಇಲಾಖೆಯ, ಕಂದಾಯ ನಿರೀಕ್ಷಕರು ಮತ್ತು ಗ್ರಾಮಲೆಕ್ಕಿಗರು.
3. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಿರಿಯ ಆರೋಗ್ಯ ಸಹಾಯಕರು.

ಹುದ್ದೆಗಳನ್ನು ಮೇಲ್ದರ್ಜೆಗೇರಿಸುವುದು ಮತ್ತು ಹುದ್ದೆಗಳಿಗೆ ಹೆಚ್ಚಿನ ವೇತನ ಶ್ರೇಣಿಯನ್ನು ನಿಗದಿಪಡಿಸುವುದು ಇತ್ಯಾದಿ ವಿಷಯಗಳು ಬಹಳ ಸಂಕೀರ್ಣವಾದ ವಿಷಯವಾಗಿದ್ದು, ಸೇವೆಯ ಅಗತ್ಯತೆ, ಇಲಾಖೆಗಳು ಒದಗಿಸುವ ಸೇವೆಗಳ ಪ್ರಭಾವ ಮತ್ತು ಹುದ್ದೆಗಳನ್ನು ಧಾರಣೆ ಮಾಡಿರುವ ನೌಕರರ ತತ್ಸಂಬಂಧದ ಹೊಣೆಗಾರಿಕೆ ಮತ್ತು ಕರ್ತವ್ಯದ ಸ್ವರೂಪ, ಪದೋನ್ನತಿಯ ಅವಕಾಶಗಳು, ಶ್ರೇಣೀಕೃತ ವ್ಯವಸ್ಥೆ, ಕರ್ತವ್ಯಗಳು ಮತ್ತು ಜವಾಬ್ದಾರಿಗಳು, ಕೆಲಸದ ಕಾರ್ಯಸ್ವರೂಪದ ವಿಂಗಡಣೆ, ಹುದ್ದೆಗೆ ನಿಗದಿಪಡಿಸಲಾದ ಕಾರ್ಯನಿರ್ವಹಣಾ ಪಟ್ಟಿ ಇತ್ಯಾದಿ ಅಂಶಗಳ ವಿಸ್ತೃತ ಪರಿಗಣನೆಗೆ ಒಳಪಟ್ಟಿರುತ್ತದೆ.

ವೇತನ ಆಯೋಗದ ಈ ಶಿಫಾರಸ್ಸನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಆಯೋಗವು ಈ ಮೇಲಿನ ಅಂಶಗಳನ್ನು ಪರಿಗಣನೆಗೆ ತೆಗೆದುಕೊಳ್ಳದಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದುದರಿಂದ, ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 24 ಎಸ್‌ಆರ್‌ಪಿ 2018(XII)**
**ಬೆಂಗಳೂರು, ದಿನಾಂಕ: 28ನೇ ಮೇ 2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಈ ಕೆಳಕಂಡ ವೃಂದಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸನ್ನು ಸರ್ಕಾರವು ತಿರಸ್ಕರಿಸುತ್ತದೆ:-

1. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಉಪ ಕಾರ್ಯದರ್ಶಿಗಳು (ಜಿಲ್ಲಾ ಪಂಚಾಯತ್)(ಆಯ್ಕೆ ಶ್ರೇಣಿ).
2. ಕಂದಾಯ ಇಲಾಖೆಯ, ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಿಗರು.
3. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಿರಿಯ ಆರೋಗ್ಯ ಸಹಾಯಕರು.

2. ಉಳಿದ ವೃಂದಗಳ ವೇತನ ಶ್ರೇಣಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ಕೆಲವು ವೃಂದಗಳಿಗೆ ಭತ್ಯೆಗಳನ್ನು ಮಂಜೂರು ಮಾಡುವ ಶಿಫಾರಸ್ಸುಗಳನ್ನು ವಿಸ್ತೃತ ಪರಿಶೀಲನೆಗಾಗಿ ಸರ್ಕಾರವು ರಚಿಸುವ ಅಧಿಕಾರಿ ಸಮಿತಿಗೆ ವಹಿಸಲಾಗುವುದು.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಡಿ.ಎಸ್.ಜೋಗೋಜೆ)**
**ಸರ್ಕಾರದ ಉಪ ಕಾರ್ಯದರ್ಶಿ**
**ಆರ್ಥಿಕ ಇಲಾಖೆ (ಸೇವೆಗಳು-2)**

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

**ಇವರಿಗೆ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು(G&SSA),ಕರ್ನಾಟಕ,ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
5. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.

6. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್‌ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
7. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು
8. ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ.
9. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'A', ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
13. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
14. ವಾರಪತ್ರ /ಶಾಖೆಯ ರಕ್ಷಾಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿಸಿ.**